# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉತ್ತರ ಕನ್ನಡ ಜಿಲ್ಲೆ ಹಳಿಯಾಳ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಸ್ತರಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದು 30.9.2020ರಂದು ನಿವೃತ್ತರಾಗಲಿರುವ ಅಧಿಕಾರಿಗಳ ಬಾಕಿ ವೇತನ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 3 ಶಾಖೆಯ ಕಡತ ಸಂಖ್ಯೆ: ಆಇ 311 ವೆಚ್ಚ 3/2020(ಇ)

**ಪ್ರಸ್ತಾವನೆ:**

ಉತ್ತರ ಕನ್ನಡ ಜಿಲ್ಲೆ ಹಳಿಯಾಳ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಸ್ತರಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದು 30.9.2020ರಂದು ನಿವೃತ್ತರಾಗಲಿರುವ ಶ್ರೀ ಎಸ್.ಆರ್.ಹಿಟ್ಟಣಗಿ ಇವರ ಬಾಕಿ ವೇತನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2225–00–103–0–74–005ರಡಿ ರೂ.3.29ಲಕ್ಷಗಳನ್ನು ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಸ್ತಾವಿತ ವೆಚ್ಚಕ್ಕಾಗಿ ರೂ3.29ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–197–1–10–300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ

## ಸರ್ಕಾರದ ಆದೇಶ ಸಂಖ್ಯೆ: ಆಇ 315 ವೆಚ್ಚ 6/2020(ಇ) ದಿನಾಂಕ: 7ನೇ ಸೆಪ್ಟೆಂಬರ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಮಾತ್ರ ಅಗತ್ಯವಿರುವ ಅನುದಾನ ರೂ.3.29ಲಕ್ಷ (ರೂಪಾಯಿ ಮೂರು ಲಕ್ಷದ ಇಪ್ಪತ್ತೊಂಬತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಕ್ರಸಂ | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–197–1–10–300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಹಳಿಯಾಳ | 2225–00–103–0–74–005 | 3.29 |
| | ಒಟ್ಟು | | **3.29** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

1414952207
7/9/20

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಹಳಿಯಾಳ
7. ಉಪ ಖಜಾನಾಧಿಕಾರಿಗಳು, ಹಳಿಯಾಳ
8. ಆರ್ಥಿಕ ಇಲಾಖೆ ವೆಚ್ಚ 3 ಶಾಖೆಯ ಕಡತಕ್ಕೆ
9. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ